ಮರುಳು ಮಾಡಿ ಕೊಂಡೆಯಲ್ಲೆ ಮಾಯಾದೇವಿಯೆ ‖ ಪ ‖
ಇರುಳು ಹಗಲು ಏಕವಾಗಿ ಹರಿಯು ನಿನ್ನ ಬಿಡದಿಪ್ಪಂತೆ ‖ ಅಪ ‖

ಜ್ಞಾನಿಗಳು ನಿತ್ಯ ಪಾನಾದಿಗಳನ್ನು ಬಿಟ್ಟು
ನಾನ ವಿಧ ತಪವಿದ್ದರು ಧ್ಯಾನಕ್ಕೆ ಸಿಲುಕದವನ ‖ ೧ ‖

ಸರ್ವ ಸನ್ಗ ಬಿಟ್ಟು ಸನ್ಯಾಸಿಯಾದ ಕಾಲಕ್ಕೂ
ಸರ್ವದಾ ತನ್ನೆದೆಯ ಮೇಲೆ ಬಿಡದೆ ನಿನ್ನ ಧರಿಸಿಪ್ಪಂತೆ ‖ ೨ ‖

ಪ್ರಳಯ ಕಾಲದಲ್ಲಿ ಆಲದೆಲೆಯ ಮೇಲೆ ಮಲಗಿದ್ದಾಗ
ಹಲವು ಆಭರಣಗಳು ಜಲವು ಆಗಿ ಜಾಣತನದಿ ‖ ೩ ‖

ರಂಗನು ಭೂಲೋಕದಿ ಭುಜನ್ಗ ಗಿರಿಯೊಳಲ
ಮೇಲು ಮಂಗಪತಿಯಾಗಿ ನಿನ್ನ ಅಂಗೀಕರಿಸುವಂತೆ ‖ ೪ ‖

ಮಕ್ಕಳ ಪಡೆದರೆ ನಿನ್ನ ಚೊಕ್ಕತನವು ಪೋಪುದೆಂದು
ಪೊಕ್ಕುಳೊಳು ಮಕ್ಕಳ ಪಡೆದು ಕಕ್ಕುಲಾದಿ ಪಡುವಂತೆ ‖ ೫ ‖

ಎಡಕೆ ಭೂಮಿ ಬಲಕೆ ಶ್ರೀಯು ಎದುರಿನಲ್ಲಿ ದುರ್ಗಾದೇವಿ
ತೊಡೆಯ ಮೇಲೆ ಲಕುಮಿಯಾಗಿ ಬಿಡದೆ ಮುದ್ದಾಡಿಸುವಂತೆ ‖ ೬ ‖

ಎಂದೆಂದಿಗೂ ಮರೆಯೆ ನಿನ್ನಾನಂದದಿ ಜನರಿಗೆಲ್ಲ
ತಂದು ತೋರೆ ಸ್ವಾಧೀನ ಪುರಂದರ ವಿಟ್ಠಲ ರಾಯನ ‖ ೭ ‖